ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ______________________

ಪತ್ರಿಕೆಯ ಹೆಸರು : NAME OF THE NEWS PAPER: ______________ ದಿನಾಂಕ : DATE : 20-12-20

# ಸಭಾಪತಿ ಸ್ಥಾನಕ್ಕೆ ಜೆಡಿಎಸ್ ಒತ್ತಡ

ಬೆಂಗಳೂರು: ವಿಧಾನಪರಿಷತ್‌ನಲ್ಲಿ ಸಭಾಪತಿ ಸ್ಥಾನ ನಾವೇ ಪಡೆಯೋಣ ಎಂದು ಜೆಡಿಎಸ್ ವಿಧಾನಪರಿಷತ್ ಸದಸ್ಯರು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಮೇಲೆ ಒತ್ತಡ ಹೇರಿದ್ದಾರೆ.ಹಿಂದೊಮ್ಮೆ ಜೆಡಿಎಸ್ ನೆರವಿನಿಂದ ಬಿಜೆಪಿಯ ಡಿ.ಎಚ್.ಶಂಕರಮೂರ್ತಿ ಅವರು ವಿಧಾನಪರಿಷತ್ ಸಭಾಪತಿ ಆಗಿದ್ದರು. ಈ ಬಾರಿ ಸಭಾಪತಿ ಸ್ಥಾನ ನಮಗೇ ಇರಲಿ ಎಂದು ಬಿಜೆಪಿ ನಾಯಕರಿಗೆ ಬೇಡಿಕೆ ಇಡಬೇಕು ಎಂಬುದು ಇವರ ವಾದ ಎಂದು ಹೇಳಲಾಗಿದೆ.

ಪರಿಷತ್‌ನ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಅವರನ್ನುಸಭಾಪತಿ ಮಾಡುವುದಾಗಿ ಹೇಳಿದರೂ ಬಿಜೆಪಿಯವರೂ ಒಪ್ಪಬಹುದು ಎಂದು ತಿಳಿಸಿದ್ದಾರೆ ಎನ್ನಲಾಗಿದೆ. ಈ ವಿಚಾರದಲ್ಲಿ ಅನಿವಾರ್ಯ ಆದರೆ ಬಿಜೆಪಿ ರಾಷ್ಟ್ರೀಯ ನಾಯಕರ ಜತೆಯೇ ಮಾತನಾಡಿ ಎಂದು ಹೇಳಿದ್ದಾರೆ. ಆದರೆ, ದೇವೇಗೌಡರು ಬಿಜೆಪಿ ನಾಯಕರ ಜತೆ ಸಭಾಪತಿ ವಿಚಾರಕ್ಕೆ ನಾನು ಮಾತನಾಡುವುದು ಸರಿ ಹೋಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯ ಬಿಜೆಪಿ ನಾಯಕರೇ ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡುವ ದೊಡ್ಡತನ ತೋರಲಿ. ಇದರಿಂದ ಉತ್ತಮ ಸಂದೇಶ ರವಾನೆಯಾಗುತ್ತದೆ. ಹಿಂದೆ ನಾವು ಕಾಂಗ್ರೆಸ್ ಅವಿಶ್ವಾಸ ನಿರ್ಣಯ ಮಂಡಿಸಿದರೂ ಬಿಜೆಪಿಗೆ ಬೆಂಬಲ ನೀಡಿ ಡಿ.ಎಚ್.ಶಂಕರಮೂರ್ತಿ ಅವರು ಸಭಾಪತಿಯಾಗಲು ನೆರವಾಗಿದ್ದೆವು ಎಂದು ಪಕ್ಷದ ಮುಖಂಡರೊಬ್ಬರು ಹೇಳುತ್ತಾರೆ.